# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

2

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 8/11/20

### ಎಸ್. ಮೂರ್ತಿ ಸಲ್ಲಿಸಿದ್ದ ಅರ್ಜಿ ವಜಾ

ವಿಶ್ವವಾಣಿ 8/11/20

ಬೆಂಗಳೂರು: ಬೆಳಗಾವಿ ಅಧಿವೇಶನ ಸಂದರ್ಭದಲ್ಲಿ ಅವ್ಯವಹಾರ ನಡೆಸಿದ ಆರೋಪ ಸಂಬಂಧ ವಿಧಾನ ಸಭೆ ವಿಶೇಷ ಮಂಡಳಿ ನಡೆಸುತ್ತಿರುವ ವಿಚಾರಣೆಯನ್ನು ರದ್ದುಗೊಳಿಸುವಂತೆ ಕೋರಿ ಎಸ್. ಮೂರ್ತಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ತಿರಸ್ಕರಿಸಿದೆ.

ತಮ್ಮ ವಿರುದ್ಧ ವಿಶೇಷ ಮಂಡಳಿ ನಡೆಸುತ್ತಿರುವ ಅರ್ಜಿ ವಿಚಾರಣೆಗೆ ತಡೆ ನೀಡಬೇಕು ಎಂದು ಕೋರಿ ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಅಮಾನತುಗೊಂಡಿರುವ ಎಸ್. ಮೂರ್ತಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾ. ಸಂಜಯ್ ಗೌಡ ಅವರಿದ್ದ ಪೀಠ, ಈ ಆದೇಶ ನೀಡಿದೆ. ಹಾಗೆಯೇ, ಅರ್ಜಿದಾರರ ವಿರುದ್ಧದ ವಿಚಾರಣೆಯನ್ನು 6 ತಿಂಗಳಲ್ಲಿ ಪೂರ್ಣಗೊಳಿಸುವಂತೆ ನಿರ್ದೇಶಿಸಿದೆ.

2016-17ನೇ ಸಾಲಿನಲ್ಲಿ ಬೆಳಗಾವಿ ಸುವರ್ಣಸೌಧದಲ್ಲಿ ನಡೆದ ಅಧಿವೇಶನಕ್ಕಾಗಿ ನಡೆಸಿದ್ದ ಕಾಮಗಾರಿ ಹಾಗೂ ಇತರೆ ಖರ್ಚು ವೆಚ್ಚದಲ್ಲಿ ಎಸ್. ಮೂರ್ತಿ ಅವ್ಯವಹಾರ ನಡೆಸಿದ್ದಾರೆ ಎನ್ನಲಾಗಿತ್ತು.